# All India Radio: Bangalore
# National Bulletin In Kannada
# 26.01.2026  1.10 pm

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.01.2026  1.10 pm**

**<>><><*><><<>**

ಮುಖ್ಯಾಂಶಗಳು

೧. ದೇಶದೆಲ್ಲೆಡೆ ೭೭ನೇ ಗಣರಾಜ್ಯೋತ್ಸವ ಸಂಭ್ರಮ; ದೆಹಲಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಧ್ವಜಾರೋಹಣ; ಉಪರಾಷ್ಟ್ರಪತಿ, ಪ್ರಧಾನಿ ಸೇರಿ ಹಲವು ಗಣ್ಯರು ಉಪಸ್ಥಿತಿ

೨. ಕರ್ತವ್ಯ ಪಥದಲ್ಲಿ ಸೇನಾ ಶಕ್ತಿ ಅನಾವರಣ; ಪರೇಡ್ ನಲ್ಲಿ ಸ್ತಬ್ಧಚಿತ್ರಗಳ ಸಾಂಸ್ಕೃತಿಕ ವೈವಿಧ್ಯತೆ ಪ್ರದರ್ಶನ

೩. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಗಗನಯಾತ್ರಿ ಶುಭಾಂಶು ಶುಕ್ಲಾಗೆ ಶೌರ್ಯ ಪ್ರಶಸ್ತಿ ಅಶೋಕ ಚಕ್ರ ಪ್ರದಾನ

೪. ಬೆಂಗಳೂರಿನ ಮಾಣೆಕ್ ಷಾ ಮೈದಾನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಧ್ವಜಾರೋಹಣ; ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ಹಲವರು ಉಪಸ್ಥಿತಿ

**<>><><*><><<>**

ದೇಶಾದ್ಯಂತ ಇಂದು ೭೭ ನೇ ಗಣರಾಜ್ಯೋತ್ಸವವನ್ನು ಅತ್ಯಂತ ಸಡಗರ - ಸಂಭ್ರಮದಿಂದ ಆಚರಿಸಲಾಗುತ್ತಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನವದೆಹಲಿಯ ಕರ್ತವ್ಯ ಪಥದಲ್ಲಿ ನಡೆದ ಪ್ರಧಾನ ಕಾರ್ಯಕ್ರಮದಲ್ಲಿ ರಾಷ್ಟ್ರವನ್ನು ಮುನ್ನಡೆಸಿದರು. ಇದಕ್ಕೂ ಮುನ್ನ ಪ್ರಧಾನಮಂತ್ರಿ ನರೇಂದ್ರ ಮೋದಿ, ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೆ ಭೇಟಿ ನೀಡುವುದರೊಂದಿಗೆ ಸಮಾರಂಭ ಪ್ರಾರಂಭವಾಯಿತು. ಅಲ್ಲಿ ಅವರು ಹುತಾತ್ಮ ಯೋಧರಿಗೆ ಪುಷ್ಪಗುಚ್ಛ ಅರ್ಪಿಸಿ ಗೌರವ ಸಲ್ಲಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪರೇಡ್ ನ ಮುಖ್ಯ ಅತಿಥಿಗಳಾದ ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಮತ್ತು ಯುರೋಪಿಯನ್ ಕಮಿಷನ್ ನ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೆಯೆನ್ ಅವರೊಂದಿಗೆ ಸಾಂಪ್ರದಾಯಿಕವಾಗಿ ಕರ್ತವ್ಯ ಪಥಕ್ಕೆ ಆಗಮಿಸಿದರು. ಬಳಿಕ ರಾಷ್ಟ್ರಪತಿ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿದರು. ಈ ವೇಳೆ ೨೧ ಗನ್ ಸಲ್ಯೂಟ್ ನಂತರ ರಾಷ್ಟ್ರಗೀತೆ ಹಾಡಲಾಯಿತು. ಬಳಿಕ ರಾಷ್ಟ್ರಪತಿ ಅವರು ಭಾರತೀಯ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರಿಗೆ ಭಾರತದ ಅತ್ಯುನ್ನತ ಶಾಂತಿಕಾಲದ ಶೌರ್ಯ ಪ್ರಶಸ್ತಿಯಾದ ಅಶೋಕ ಚಕ್ರವನ್ನು ಪ್ರದಾನ ಮಾಡಿದರು. ಗಣರಾಜ್ಯೋತ್ಸವ ಸಮಾರಂಭದಲ್ಲಿ, ರಾಷ್ಟ್ರಪತಿ, ಪ್ರಧಾನಿ ಅವರಲ್ಲದೆ, ಉಪರಾಷ್ಟ್ರಪತಿ ಸಿ.ಪಿ. ರಾಧಕೃಷ್ಣನ್, ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಕೇಂದ್ರ ಸಂಪುಟದ ಎಲ್ಲ ಸಚಿವರು, ಸಂಸದರು, ವಿರೋಧ ಪಕ್ಷದ ನಾಯಕರು, ಮೂರು ಸೇನೆಗಳ ಹಿರಿಯ ಮತ್ತು ಕಿರಿಯ ಅಧಿಕಾರಿಗಳು, ವಿಶೇಷ ಅತಿಥಿಗಳು ಉಪಸ್ಥಿತರಿದ್ದರು. ಪರೇಡ್ ಸಮಯದಲ್ಲಿ ವಿವಿಧ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸರ್ಕಾರದ ಸಚಿವಾಲಯಗಳು ಮತ್ತು ಇಲಾಖೆಗಳ ಮೂವತ್ತು ಸ್ತಬ್ಧಚಿತ್ರಗಳನ್ನು ಪ್ರದರ್ಶಿಸಲಾಯಿತು. ಈ ಸ್ತಬ್ಧಚಿತ್ರಗಳು ೧೫೦ ವರ್ಷಗಳ ರಾಷ್ಟ್ರೀಯ ಗೀತೆ ವಂದೇ ಮಾತರಂ ಮತ್ತು ಕ್ಷೇತ್ರಗಳಲ್ಲಿ ಬೆಳೆಯುತ್ತಿರುವ ಸ್ವಾವಲಂಬನೆಯ

ಹಿನ್ನೆಲೆಯಲ್ಲಿ ರಾಷ್ಟ್ರದ ತ್ವರಿತ ಪ್ರಗತಿಯ ವಿಶಿಷ್ಟ ಮಿಶ್ರಣವನ್ನು ಪ್ರದರ್ಶಿಸಿದವು. ಭಾರತೀಯ ಭೂ ಸೇನೆ, ಭಾರತೀಯ ನೌಕಾಪಡೆ ಮತ್ತು ಭಾರತೀಯ ವಾಯುಪಡೆಯ ಸಾಮೂಹಿಕ ಶಕ್ತಿ, ಏಕತೆ ಮತ್ತು ಏಕೀಕರಣವನ್ನು ಪ್ರತಿನಿಧಿಸುವ 'ಆಪರೇಷನ್ ಸಿಂಧೂರ' ಕುರಿತು ಚಿತ್ರಗಳನ್ನು ಪ್ರದರ್ಶಿಸಲಾಯಿತು. ಸೇನೆಯ ಹದಿನೆಂಟು ಪಥಸಂಚಲನ ತುಕಡಿಗಳು ಮತ್ತು ೧೩ ಬ್ಯಾಂಡ್‌ಗಳು ಸಹ ಪರೇಡ್‌ನಲ್ಲಿ ಭಾಗವಹಿಸಿದವು. ಸೇನೆಯು ಮೊದಲ ಬಾರಿಗೆ ಬ್ಯಾಟಲ್ ಅರೇ ಸ್ವರೂಪವನ್ನು ಸಹ ಪ್ರದರ್ಶಿಸಿತು. ಇದೇ ವೇಳೆ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಲಾಯಿತು. ಆದಾಯ ಮತ್ತು ಉದ್ಯೋಗ ಸೃಷ್ಟಿ, ತಂತ್ರಜ್ಞಾನ, ನಾವಿನ್ಯತೆ, ನವೋದ್ಯಮಗಳು ಮತ್ತು ಸ್ವಸಹಾಯ ಗುಂಪುಗಳಿಗೆ ಸಂಬಂಧಿಸಿದಂತೆ ಅನುಕರಣೀಯ ಕೆಲಸ ಮಾಡಿದ ಜನರು ಸೇರಿದಂತೆ ೫೩ ವಿಭಾಗಗಳಲ್ಲಿ ೧೦ ಸಾವಿರ ವಿಶೇಷ ಅತಿಥಿಗಳು ಪಾಲ್ಗೊಂಡಿದ್ದರು. ರಫೇಲ್, ಎಸ್‌ಯು-೩೦, ಸಿ-೨೯೫, ಮಿಗ್-೨೯, ಅಪಾಚೆ ಸೇರಿದಂತೆ ೨೯ ವಿಮಾನಗಳ ಹರಾಟದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡತು.

<><><*><><<>

ಭಾರತದ ಅತ್ಯುನ್ನತ ಶಾಂತಿಕಾಲದ ಶೌರ್ಯ ಪ್ರಶಸ್ತಿಯಾದ ಅಶೋಕ ಚಕ್ರವನ್ನು ಭಾರತೀಯ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಮತ್ತು ಗಗನಯಾತ್ರಿ ಶುಭಾಂಶು ಶುಕ್ಲಾ ಅವರಿಗೆ ಪ್ರದಾನ ಮಾಡಲಾಯಿತು. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಭಾರತದ ಐತಿಹಾಸಿಕ ಬಾಹ್ಯಾಕಾಶ ಕಾರ್ಯಾಚರಣೆಯ ಸಮಯದಲ್ಲಿ ಅವರ ಅನುಕರಣೀಯ ಧೈರ್ಯ ಮತ್ತು ನಾಯಕತ್ವಕ್ಕಾಗಿ ಅವರನ್ನು ಗೌರವಿಸಲಾಯಿತು. ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರು ಜೂನ್ ೨೦೨೫ ರಲ್ಲಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಭೇಟಿ ನೀಡಿದ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗುವ ಮೂಲಕ ಇತಿಹಾಸ ಸೃಷ್ಟಿಸಿದರು. ರಾಕೇಶ್ ಶರ್ಮಾ ಅವರ ೧೯೮೪ ರ ಕಾರ್ಯಾಚರಣೆಯ ೪೧ ವರ್ಷಗಳ ನಂತರ ಬಾಹ್ಯಾಕಾಶಕ್ಕೆ ಪ್ರಯಾಣಿಸಿದ ಎರಡನೇ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಶುಕ್ಲಾ ಬಾಹ್ಯಾಕಾಶದಲ್ಲಿ ೧೮ ದಿನಗಳನ್ನು ಕಳೆದರು, ಸಂಕೀರ್ಣ ವೈಜ್ಞಾನಿಕ ಮತ್ತು ತಾಂತ್ರಿಕ ಕಾರ್ಯಾಚರಣೆಗಳನ್ನು ನಡೆಸಿದರು, ಇದು ಭಾರತದ ಬಾಹ್ಯಾಕಾಶ ಪ್ರಯಾಣದಲ್ಲಿ ಪ್ರಮುಖ ಮೈಲಿಗಲ್ಲಾಗಿದೆ. ಬಾಹ್ಯಾಕಾಶದಲ್ಲಿ ಅವರ ಸಾಧನೆಗಳ ಹೊರತಾಗಿ, ಶುಕ್ಲಾ ೨,೦೦೦ ಗಂಟೆಗಳ ಹಾರಾಟದ ಅನುಭವವನ್ನು ಹೊಂದಿರುವ ಅತ್ಯಂತ ಅನುಭವಿ ಫೈಟರ್ ಪೈಲಟ್ ಆಗಿದ್ದಾರೆ. ಅವರು ಸುಖೋಯ್ -೩೦ ಎಂಕೆಐ, ಮಿಗ್ -೨೧, ಮಿಗ್ -೨೯, ಜಾಗ್ವಾರ್, ಹಾಕ್, ಡಾರ್ನಿಯರ್ ಮತ್ತು ಎಎನ್ -೩೨ ಸೇರಿದಂತೆ ವ್ಯಾಪಕ ಶ್ರೇಣಿಯ ವಿಮಾನಗಳನ್ನು ಹಾರಿಸಿದ್ದಾರೆ, ಇದು ಭಾರತೀಯ ವಾಯುಪಡೆಯಲ್ಲಿ ಅಸಾಧಾರಣ ವೃತ್ತಿಪರ ದಾಖಲೆಯನ್ನು ಪ್ರದರ್ಶಿಸಿದೆ.

<><><*><><<>

ಶ್ರೀಲಂಕಾದಲ್ಲಿನ ಭಾರತೀಯ ಹೈಕಮಿಷನ್ ತನ್ನ ಎಲ್ಲಾ ರಾಜತಾಂತ್ರಿಕ ಕಚೇರಿಗಳಲ್ಲಿ ೭೭ ನೇ ಗಣರಾಜ್ಯೋತ್ಸವವನ್ನು ಆಚರಿಸುತ್ತಿದೆ. ಕೊಲಂಬೊದ ಇಂಡಿಯಾ ಹೌಸ್ ನಲ್ಲಿ ಇಂದು ಬೆಳಗ್ಗೆ ಭಾರತದ ಹೈಕಮಿಷನರ್ ಸಂತೋಷ್ ಝಾ ರಾಷ್ಟ್ರಧ್ವಜಾರೋಹಣ ಮಾಡಿದರು. ಗಣರಾಜ್ಯೋತ್ಸವದ ಮುನ್ನಾದಿನದಂದು ರಾಷ್ಟ್ರಪತಿಗಳು ಮಾಡಿದ ಭಾಷಣದ ಆಯ್ದ ಭಾಗಗಳನ್ನು ಹೈಕಮಿಷನರ್ ಓದಿದರು. ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಕೇಂದ್ರ ಮತ್ತು ಶ್ರೀಲಂಕಾ ನೌಕಾಪಡೆಯ ವಿದ್ಯಾರ್ಥಿಗಳು ಪ್ರದರ್ಶಿಸಿದ ಸಾಂಸ್ಕೃತಿಕ ಕಾರ್ಯಕ್ರಮಗಳು ನಂತರ ಆಚರಣೆಯ ಉತ್ಸಾಹವನ್ನು ಹೆಚ್ಚಿಸಿದವು. ಇದಕ್ಕೂ ಮುನ್ನ ಶ್ರೀಲಂಕಾದಲ್ಲಿ ಭಾರತೀಯ ಶಾಂತಿಪಾಲನಾ ಪಡೆಯ ತ್ಯಾಗವನ್ನು ಸ್ಮರಿಸುತ್ತಾ ಹೈಕಮಿಷನರ್ ಐಪಿಕೆಎಫ್ ಸ್ಮಾರಕದಲ್ಲಿ ಪುಷ್ಪಗುಚ್ಛ ಅರ್ಪಿಸಿದರು.

<>><><*><><<>

ಗಣರಾಜ್ಯೋತ್ಸವದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ದೇಶವಾಸಿಗಳಿಗೆ ಶುಭಾಶಯಗಳನ್ನು ಕೋರಿದ್ದಾರೆ. ಈ ಸಂಬಂಧ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿರುವ ಅವರು, ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನು ನಿರ್ಮಿಸಲು ಈ ಸಂದರ್ಭವು ರಾಷ್ಟ್ರದ ನಾಗರಿಕರಲ್ಲಿ ಹೊಸ ಶಕ್ತಿ ಮತ್ತು ಉತ್ಸಾಹವನ್ನು ತುಂಬಲಿ ಎಂದು ಹಾರೈಸಿದ್ದಾರೆ.

<>><><*><><<>

ರಾಜ್ಯದೆಲ್ಲೆಡೆ ಇಂದು ೭೭ನೇ ಗಣರಾಜ್ಯೋತ್ಸವವನ್ನು ಸಡಗರ-ಸಂಭ್ರಮದಿಂದ ಆಚರಿಸಲಾಯಿತು. ಬೆಂಗಳೂರಿನ ಮಾಣಿಕ್ ? ಪರೇಡ್ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಕವಾಯತು ವಂದನೆ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಬಳಿಕ ಮಾತನಾಡಿದ ರಾಜ್ಯಪಾಲರು, ರಾಜ್ಯದಲ್ಲಿ ಹಿಂದುಳಿದವರ ಅಭಿವೃದ್ಧಿಗೆ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ರಾಜ್ಯವು ಅಭಿವೃದ್ಧಿ ಪಥದಲ್ಲಿ ಮುನ್ನಡೆಯುತ್ತಿದೆ ಎಂದು ತಿಳಿಸಿದರು. ಜ್ಞಾನ-ವಿಜ್ಞಾನ ವಲಯಗಳು, ಕಾನೂನು ಮತ್ತು ಕೈಗಾರಿಕಾ ಪರವಾದ ಹಾಗೂ ಸುವ್ಯವಸ್ಥೆ ವಾತಾವರಣಗಳಿಂದಾಗಿ ರಾಜ್ಯವು ಐಟಿ-ಬಿಟಿ ಕ್ಷೇತ್ರಗಳಲ್ಲಿ ಇಡೀ ದೇಶದಲ್ಲಿಯೇ ಮುಂಚೂಣಿ ಸ್ಥಾನದಲ್ಲಿದೆ. ಭಾರತದ ನವೋದ್ಯಮಗಳ ರಾಜಧಾನಿಯಾಗಿ ಕರ್ನಾಟಕ ರೂಪುಗೊಳ್ಳುತ್ತಿದೆ. ಇದನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲು 'ಕರ್ನಾಟಕ ನವೋದ್ಯಮ ನೀತಿ'ಯನ್ನು ಜಾರಿಗೆ ತರಲಾಗಿದೆ. ಬೆಂಗಳೂರಿನ ಆಚೆಗೂ ತಂತ್ರಜ್ಞಾನವನ್ನು ಕೊಂಡೊಯ್ಯಲು 'ಸ್ಥಳೀಯ ಆರ್ಥಿಕ ವೇಗವರ್ಧಕ ಕಾರ್ಯಕ್ರಮ' ರೂಪಿಸಿ ೧ ಸಾವಿರ ಕೋಟಿ ರೂಪಾಯಿ ಅನುದಾನ ಒದಗಿಸಲಾಗಿದೆ. ಇದರಿಂದಾಗಿ ಮುಂದಿನ ೫ ವರ್ಷಗಳಲ್ಲಿ ಉದ್ಯೋಗಗಳು ಸೃಜನೆಯಾಗಬಹುದೆಂಬ ನಿರೀಕ್ಷೆಯಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ೨೦೩೫ರ ವೇಳೆಗೆ ಕ್ವಾಂಟಮ್ ಆರ್ಥಿಕತೆಯನ್ನು ನಿರ್ಮಿಸಲು ಕರ್ನಾಟಕ ಕ್ವಾಂಟಮ್ ರೋಡ್ ಮ್ಯಾಪ್ ಬಿಡುಗಡೆ ಮಾಡಲಾಗಿದೆ ಎಂದು ರಾಜ್ಯಪಾಲರು ಗಣರಾಜ್ಯೋತ್ಸವದ ಭಾಷಣದಲ್ಲಿ ಹೇಳಿದ್ದಾರೆ.

<>><><*><><<>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ನಿನ್ನೆ ನವದೆಹಲಿಯಲ್ಲಿ ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಲೂಯಿಸ್ ಸ್ಯಾಂಟೋಸ್ ಡಾ ಕೋಸ್ಟಾ ಮತ್ತು ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೆಯೆನ್ ಅವರನ್ನು ಭೇಟಿ ಮಾಡಿದರು. ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಉಭಯ ನಾಯಕರ ಮುಂಬರುವ ಮಾತುಕತೆಗಳು ಭಾರತ-ಯುರೋಪಿಯನ್ ಯೂನಿಯನ್ ಸಂಬಂಧಗಳಲ್ಲಿ ಹೊಸ ಅಧ್ಯಾಯವನ್ನು ಸೃಷ್ಟಿಸುತ್ತವೆ ಎಂದು ಡಾ.ಜೈಶಂಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<>><><*><><<>

ದೇಶದಲ್ಲಿ ಐಸ್ ಹಾಕಿ ಕ್ರಾಂತಿ ನಡೆಯುತ್ತಿದೆ. ಭಾರತೀಯ ಸೇನೆಯ ವಿಶೇಷ ಪರ್ವತ ಪದಾತಿ ದಳವಾದ ಲಡಾಖ್ ಸ್ಕೌಟ್ಸ್ ಇದರ ಮುಂಚೂಣಿಯಲ್ಲಿದೆ. ಭಾರತವು ತನ್ನ ೭೭ನೇ ಗಣರಾಜ್ಯೋತ್ಸವವನ್ನು ಆಚರಿಸುತ್ತಿರುವ ಈ ಸಂದರ್ಭದಲ್ಲಿ, ಐಸ್ ಹಾಕಿ ಕ್ಷೇತ್ರದಲ್ಲಿ ಅವರ ಅನುದಾನಿತ ಕೆಲಸವನ್ನು ಗುರುತಿಸಲು ಇದು ಸುಸಂದರ್ಭ. ೨೦೨೬ರ ಖೇಲೋ ಇಂಡಿಯಾ ವಿಂಟರ್ ಗೇಮ್ಸ್‌ನ ಆರನೇ ಆವೃತ್ತಿಯ ಮೊದಲ ಹಂತವು ಲಡಾಖ್‌ನ ಲೇಹ್‌ನಲ್ಲಿ ನಡೆಯುತ್ತಿದೆ. ಇದರಲ್ಲಿ ಐಸ್ ಹಾಕಿ ಮತ್ತು

ಐಸ್ ಸ್ಕೇಟಿಂಗ್ ಸ್ಪರ್ಧೆಗಳಿದ್ದು, ಲಡಾಖ್ ಸ್ಕೌಟ್ಸ್ ಪ್ರತಿನಿಧಿಸುವ ಸೇನಾ ತಂಡವು ಮತ್ತೊಮ್ಮೆ ಅಜೇಯವಾಗಿ ಹೊರಹೊಮ್ಮುತ್ತಿದೆ. ಗಣರಾಜ್ಯೋತ್ಸವದಲ್ಲಿಂದು ನಡೆಯಲಿರುವ ಪುರುಷರ ಫೈನಲ್‌ನಲ್ಲಿ ಸೇನಾ ತಂಡವು, ಚಂಡೀಗಢ ತಂಡವನ್ನು ಎದುರಿಸಲಿದೆ. ಆದರೆ, ಕೇವಲ ಗೆಲುವು ಅಥವಾ ಚಿನ್ನದ ಪದಕಗಳಿಗಿಂತ ಕ್ರೀಡಾ ಮೈದಾನದ ಹೊರಗಿನ ಅವರ ಪ್ರಯತ್ನಗಳು ಹೆಚ್ಚು ಮಹತ್ವದ್ದಾಗಿವೆ.

**<>><><*><><<>**

ವಡೋದರದ ಬಿಸಿಎ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್‌ನ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಮುಂಬೈ ಇಂಡಿಯನ್ಸ್ ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**